ಸಮಗ್ರ ಶಿಕ್ಷಣ ಕರ್ನಾಟಕ

**ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು-01**

ಸಶಿಕ/ಆಚ/ರ.ಪ್ರಸ್ಪ/01/2025-26 ದಿನಾಂಕ: 29.10.2025

**ಸುತ್ತೋಲೆ**

| | |
|---|---|
| **ವಿಷಯ :** | 2025-26ನೇ ಸಾಲಿನ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ರಸಪ್ರಶ್ನೆ ಸ್ಪರ್ಧೆಯನ್ನು (Quiz Competition) ಹಮ್ಮಿಕೊಳ್ಳುವ ಬಗ್ಗೆ. |
| **ಉಲ್ಲೇಖ :** | ವಾರ್ಷಿಕ ಯೋಜನಾ ಮಂಡಳಿಯ ಅನುಮೋದನೆಯ ದಿನಾಂಕ:19.05.2025. |

*********

ಮೇಲಿನ ಉಲ್ಲೇಖಿತ ವಿಷಯಕ್ಕೆ ಸಂಬಂಧಿಸಿದಂತೆ, 2025-26ನೇ ಸಾಲಿನ ಯೋಜನಾ (PAB) ಅನುಮೋದನಾ ಮಂಡಳಿಯಿಂದ "ರಾಷ್ಟ್ರೀಯ ಅವಿಷ್ಕಾರ್ ಅಭಿಯಾನ"(5.2 & 3.6) ಕಾರ್ಯಕ್ರಮದಡಿ ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ರಸಪ್ರಶ್ನೆ ಸ್ಪರ್ಧೆಯನು ಆಯೋಜಿಸಲು (5.2.1) ಪ್ರಾಥಮಿಕ ವಿಭಾಗಕ್ಕೆ ರೂ.35.00 ಲಕ್ಷಗಳು ಹಾಗೂ (3.6.1) ಪ್ರೌಢಶಾಲಾ ವಿಭಾಗಕ್ಕೆ ರೂ.35.00 ಲಕ್ಷಗಳು ಒಟ್ಟು ರೂ.70.00 ಲಕ್ಷಗಳ ಅನುದಾನ ಅನುಮೋದನೆಯಾಗಿರುತ್ತದೆ.

ರಸಪ್ರಶ್ನೆ ಸ್ಪರ್ಧೆಯು ವಿದ್ಯಾರ್ಥಿಗಳಿಗೆ ಮನರಂಜನಾತ್ಮಕ ಹಾಗೂ ಬುದಿಮತ್ತೆಯ ಸ್ಪರ್ಧೆಯಾಗಿದೆ. ಕಲಿಕೆಯಲ್ಲಿ ಆಸಕ್ತಿಯನ್ನು ಬೆಳೆಸುವಂತಹ ಚಟುವಟಿಕೆಗಳನ್ನು ಮತ್ತು ಸ್ಪರ್ಧೆಗಳನ್ನು ಆಯೋಜಿಸುವ ಮೂಲಕ ಅವರಲ್ಲಿ ಗಣಿತ, ವಿಜ್ಞಾನ, ತಂತ್ರಜ್ಞಾನ, ಸಾಮಾನ್ಯ ಜ್ಞಾನ, ಭಾಷೆ, ಭಾರತ ದೇಶದ ಪರಂಪರೆ ಹಾಗೂ ಇತರೆ ವಿಷಯಗಳಲ್ಲಿ ಅರಿವಿನ ಮಟ್ಟವನ್ನು ಹೆಚ್ಚಿಸಲು ಪೂರಕವಾಗಿದೆ.

**ಉದ್ದೇಶಗಳು:**

- ವಿದ್ಯಾರ್ಥಿಗಳಲ್ಲಿ ವಿಜ್ಞಾನ, ಗಣಿತ ಹಾಗೂ ತಂತ್ರಜ್ಞಾನ ವಿಷಯಗಳ ಕಲಿಕೆಯಲ್ಲಿ ಆಸಕ್ತಿಯನ್ನು ಬೆಳೆಸುವುದು.
- ವಿದ್ಯಾರ್ಥಿಗಳಲ್ಲಿ ಹೊಸ ವಿಷಯಗಳ ಬಗ್ಗೆ ತಿಳಿಯುವ ಕುತೂಹಲ ಹಾಗೂ ಸಾಮಾನ್ಯ ಜ್ಞಾನವನ್ನು ಬೆಳೆಸುವುದು.
- ವಿದ್ಯಾರ್ಥಿಗಳಲ್ಲಿ ಚಿಂತಿಸುವ, ವಿಶ್ಲೇಷಿಸುವ ಹಾಗೂ ನಾಯಕತ್ವದ ಗುಣಗಳನ್ನು ಬೆಳೆಸುವುದು.
- ಭಾರತವು ವಿವಿಧ ಕ್ಷೇತ್ರಗಳಲ್ಲಿ ಸಾಧಿಸಿರುವ ಸಾಧನೆಯ ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವುದು.
- ವಿದ್ಯಾರ್ಥಿಗಳನ್ನು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸುವಂತೆ ಪ್ರೇರೇಪಿಸಿ, ಅವರಲ್ಲಿ ಸ್ಪರ್ಧಾಮನೋಭಾವನೆಯನ್ನು ಬೆಳೆಸುವುದು.

**ಸ್ಪರ್ಧೆಯ ಹಂತಗಳು:-**

ಶಾಲಾ, ತಾಲ್ಲೂಕು, ಜಿಲ್ಲಾ, ವಿಭಾಗ ಹಾಗೂ ರಾಜ್ಯ ಹಂತಗಳಲ್ಲಿ ರಸಪ್ರಶ್ನೆ ಸ್ಪರ್ಧೆಯನ್ನು ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ಆಯೋಜಿಸುವುದು.

1. **ಜೂನಿಯರ್ ಹಂತ - (5-7 ನೇ ತರಗತಿಯ ವಿದ್ಯಾರ್ಥಿಗಳಿಗಾಗಿ)**
2. **ಸೀನಿಯರ್ ಹಂತ - (8-10ನೇ ತರಗತಿಯ ವಿದ್ಯಾರ್ಥಿಗಳಿಗಾಗಿ)**

**ಸ್ಪರ್ಧೆಯ ನೋಂದಣಿ ಮತ್ತು ಪ್ರಕ್ರಿಯೆ:**

- **ಶಾಲಾ ಹಂತದ ರಸಪ್ರಶ್ನೆ ಸ್ಪರ್ಧೆ**:-ಪ್ರತಿ ಶಾಲೆಯಿಂದ ಶಾಲಾ ಹಂತದ ಸ್ಪರ್ಧೆಗೆ ಶಿಕ್ಷಕರು ಗಣಿತ, ವಿಜ್ಞಾನ, ತಂತ್ರಜ್ಞಾನ, ಭಾರತದ ಇತಿಹಾಸ-ಪರಂಪರೆ, ಭೌಗೋಳಿಕ, ಸಾಂಸ್ಕೃತಿಕ, ಸಾಹಿತ್ಯ, ಭಾಷೆ, ಕಲೆ, ಸಾಮಾನ್ಯ ಜ್ಞಾನ, ಕ್ರೀಡೆ, ಮಾನಸಿಕ ಸಾಮರ್ಥ್ಯ, ಪ್ರಚಲಿತ ವಿದ್ಯಮಾನ ಇತ್ಯಾದಿ ವಿಷಯಗಳನ್ನೊಳಗೊಂಡಂತೆ ಪ್ರಶ್ನೆಗಳನ್ನು ಸಿದ್ಧಪಡಿಸಿಕೊಂಡು (ಪ್ರತಿ ವಿಷಯಕ್ಕೆ ಕನಿಷ್ಠ 50 ಬಹು ಆಯ್ಕೆಯ ಪ್ರಶ್ನೆಗಳು) ಉತ್ತರ ಸಹಿತ ಸಿದ್ಧಪಡಿಸಿ, ಮುಖ್ಯಶಿಕ್ಷಕರಿಂದ ಅನುಮೋದಿಸಿಕೊಂಡು ವಿದ್ಯಾರ್ಥಿಗಳಿಗೆ ಸ್ಪರ್ಧೆಯನ್ನು ಹಮ್ಮಿಕೊಳ್ಳುವುದು.
- ಶಾಲಾ ಹಂತದ ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಗಳಿಸಿ ವಿಜೇತರಾದ 3 ವಿದ್ಯಾರ್ಥಿಗಳ ಹೆಸರನ್ನು ಶಿಕ್ಷಕರು ವಿದ್ಯಾರ್ಥಿಗಳ SATS ID, ಮೊಬೈಲ್ ಸಂಖ್ಯೆ, ಮೊಬೈಲ್/ಲ್ಯಾಪ್‌ಟಾಪ್/ಕಂಪ್ಯೂಟರ್‌ನ್ನು ಬಳಸಿ ವಿದ್ಯಾವಾಹಿನಿ Portalನಲ್ಲಿ ನೋಂದಣಿ ಮಾಡುವುದು ಹಾಗೂ ವಿದ್ಯಾವಾಹಿನಿ Portal ನಲ್ಲಿ ಪ್ರಮಾಣಪತ್ರವನ್ನು ಡೌನ್‌ಲೋಡ್ ಮಾಡಿ ವಿದ್ಯಾರ್ಥಿಗಳಿಗೆ ನೀಡಿ ಮಕ್ಕಳನ್ನು ಪ್ರೋತ್ಸಾಹಿಸುವುದು. ವಿಜೇತರಾದ **ಈ 3 ವಿದ್ಯಾರ್ಥಿಗಳು** ತಾಲ್ಲೂಕು ಮಟ್ಟದ ರಸ ಪ್ರಶ್ನೆ ಸ್ಪರ್ಧೆಯಲ್ಲಿ ಭಾಗವಹಿಸಲು ಒದಗಿಸಲಾದ softwareನಲ್ಲಿ ತಕ್ಷಣವೇ ನೋಂದಾಯಿಸಿಕೊಳ್ಳಬೇಕು.
- **ತಾಲ್ಲೂಕು ಹಂತದ ರಸಪ್ರಶ್ನೆ ಸ್ಪರ್ಧೆ**:-
- ತಾಲ್ಲೂಕು ಮಟ್ಟದ ಸ್ಪರ್ಧೆಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಶಾಲೆಯಲ್ಲಿ ಶಾಲಾ ಸಮಯದಲ್ಲಿ ಮುಖ್ಯ ಶಿಕ್ಷಕರ ಸಮ್ಮುಖದಲ್ಲಿ

LIVEWORKSHEETS

ವಿದ್ಯಾರ್ಥಿಗಳು ರಸಪ್ರಶ್ನೆ ಸ್ಪರ್ಧೆಯಲ್ಲಿ ಭಾಗವಹಿಸುವುದು. ಬಹುಲಾಗಿನ್‌ಗಳಿಗೆ ಅವಕಾಶವಿರುವುದಿಲ್ಲ.

- ತಾಲ್ಲೂಕು ಮಟ್ಟದ ಸ್ಪರ್ಧೆಯಲ್ಲಿ ಜೂನಿಯರ್ ಹಾಗೂ ಸೀನಿಯರ್ ವಿಭಾಗದಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಗಳಿಸಿದ 3 ವಿದ್ಯಾರ್ಥಿಗಳಿಗೆ ನಗದು ಬಹುಮಾನ ಹಾಗೂ ಪ್ರಮಾಣ ಪತ್ರವನ್ನು ನೀಡಲಾಗುವುದು. ವಿದ್ಯಾವಾಹಿನಿ Portal ನಲ್ಲಿ ಪ್ರಮಾಣಪತ್ರವನ್ನು ಡೌನ್‌ಲೋಡ್ ಮಾಡಿ ವಿದ್ಯಾರ್ಥಿಗಳಿಗೆ ನೀಡಿ ಮಕ್ಕಳನ್ನು ಪ್ರೋತ್ಸಾಹಿಸುವುದು. ಪ್ರತಿ ತಾಲ್ಲೂಕಿನ ವಿಜೇತ ವಿದ್ಯಾರ್ಥಿಗಳ ಆಧಾರ್ ಜೋಡಣೆಯಾದ ಬ್ಯಾಂಕ್ ಖಾತೆಯ ವಿವರಗಳನ್ನು ವಿದ್ಯಾವಾಹಿನಿ Portal ನಲ್ಲಿ ನಮೂದಿಸುವುದು. ಬಹುಮಾನದ ಮೊತ್ತವನ್ನು ವಿದ್ಯಾರ್ಥಿಗಳ ಖಾತೆಗೆ ನೇರವಾಗಿ ವರ್ಗಾಯಿಸಲಾಗುವುದು.
- ತಾಲ್ಲೂಕು ಹಂತದ ರಸಪ್ರಶ್ನೆ ಸ್ಪರ್ಧೆಯಲ್ಲಿ ಜೂನಿಯರ್ ಹಾಗೂ ಸೀನಿಯರ್ ವಿಭಾಗದಿಂದ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲು ಆಯ್ಕೆ ಮಾಡಲಾಗುವುದು.

**ಜಿಲ್ಲಾ ಹಂತದ ರಸಪ್ರಶ್ನೆ ಸ್ಪರ್ಧೆ:-**

- ತಾಲ್ಲೂಕು ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ವಿಜೇತರಾದ ವಿದ್ಯಾರ್ಥಿಗಳು ಜಿಲ್ಲಾ ಹಂತದ ರಸಪ್ರಶ್ನೆ ಸ್ಪರ್ಧೆಯಲ್ಲಿ ಭಾಗವಹಿಸುವುದು.
- ಜೂನಿಯರ್ ಹಾಗೂ ಸೀನಿಯರ್ ವಿಭಾಗದ ಜಿಲ್ಲಾ ಹಂತದ ರಸಪ್ರಶ್ನೆ ಸ್ಪರ್ಧೆಯನ್ನು ಆಯಾ ತಾಲ್ಲೂಕುಗಳ BRC ರವರ ನೇತೃತ್ವದಲ್ಲಿ ಆಯಾಯ ಕ್ಷೇತ್ರ ಸಂಪನ್ಮೂಲ ಕೇಂದ್ರಗಳಲ್ಲಿಯೇ ಹಮ್ಮಿಕೊಳ್ಳುವುದು
- ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಜೂನಿಯರ್ ಹಾಗೂ ಸೀನಿಯರ್ ವಿಭಾಗದಿಂದ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಗಳಿಸಿದ ವಿಜೇತರಿಗೆ ನಗದು ಬಹುಮಾನ ಹಾಗೂ ಪ್ರಮಾಣಪತ್ರ ನೀಡಲಾಗುವುದು. ವಿದ್ಯಾವಾಹಿನಿ Portal ನಲ್ಲಿ ಪ್ರಮಾಣಪತ್ರವನ್ನು ಡೌನ್‌ಲೋಡ್ ಮಾಡಿ ವಿದ್ಯಾರ್ಥಿಗಳಿಗೆ ನೀಡಿ ಮಕ್ಕಳನ್ನು ಪ್ರೋತ್ಸಾಹಿಸುವುದು. ಪ್ರತಿ ಜಿಲ್ಲಾ ಹಂತದಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನಗಳಿಸಿ ವಿಜೇತರಾದ ವಿದ್ಯಾರ್ಥಿಗಳ ಬಹುಮಾನದ ಮೊತ್ತವನ್ನು ವಿದ್ಯಾರ್ಥಿಗಳ ಖಾತೆಗೆ ನೇರವಾಗಿ ವರ್ಗಾಯಿಸಲಾಗುವುದು.
- ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಜೂನಿಯರ್ ಹಾಗೂ ಸೀನಿಯರ್ ವಿಭಾಗದಿಂದ ಪ್ರಥಮ ಸ್ಥಾನ ಪಡೆದು ವಿಜೇತರಾದ ವಿದ್ಯಾರ್ಥಿಗಳನ್ನು ವಿಭಾಗ ಮಟ್ಟದ ರಸಪ್ರಶ್ನೆ ಸ್ಪರ್ಧೆಗೆ ಆಯ್ಕೆ ಮಾಡಿಕೊಳ್ಳಲಾಗುವುದು.

**ವಿಭಾಗ ಹಂತದ ರಸಪ್ರಶ್ನೆ ಸ್ಪರ್ಧೆ:-**

- ಜಿಲ್ಲಾ ಮಟ್ಟದಲ್ಲಿ ಜೂನಿಯರ್ ಹಾಗೂ ಸೀನಿಯರ್ ವಿಭಾಗದಿಂದ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳು ಆಯಾ ಜಿಲ್ಲಾ ಡಯಟ್‌ಗಳಲ್ಲಿ ಪ್ರಾಂಶುಪಾಲರ ನೇತೃತ್ವದಲ್ಲಿ ವಿಭಾಗ ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ಭಾಗವಹಿಸುವುದು.
- ವಿಭಾಗ ಮಟ್ಟದ ಸ್ಪರ್ಧೆಯಲ್ಲಿ ಜೂನಿಯರ್ ಹಾಗೂ ಸೀನಿಯರ್ ವಿಭಾಗದಿಂದ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಗಳಿಸಿದ ವಿಜೇತರಿಗೆ ನಗದು ಬಹುಮಾನ ಹಾಗೂ ಪ್ರಮಾಣಪತ್ರ ನೀಡಲಾಗುವುದು. ವಿದ್ಯಾವಾಹಿನಿ Portal ನಲ್ಲಿ ಪ್ರಮಾಣಪತ್ರವನ್ನು ಡೌನ್‌ಲೋಡ್ ಮಾಡಿ ವಿದ್ಯಾರ್ಥಿಗಳಿಗೆ ನೀಡಿ ಮಕ್ಕಳನ್ನು ಪ್ರೋತ್ಸಾಹಿಸುವುದು. ಪ್ರತಿ ವಿಭಾಗ ಹಂತದಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನಗಳಿಸಿ ವಿಜೇತರಾದ ವಿದ್ಯಾರ್ಥಿಗಳ ಬಹುಮಾನದ ಮೊತ್ತವನ್ನು ವಿದ್ಯಾರ್ಥಿಗಳ ಖಾತೆಗೆ ನೇರವಾಗಿ ವರ್ಗಾಯಿಸಲಾಗುವುದು.
- ವಿಭಾಗ ಮಟ್ಟದ ಸ್ಪರ್ಧೆಯಲ್ಲಿ ಜೂನಿಯರ್ ಹಾಗೂ ಸೀನಿಯರ್ ವಿಭಾಗದಿಂದ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದು ವಿಜೇತರಾದ 4 ವಿಭಾಗದಿಂದ ಒಟ್ಟು 16 ವಿದ್ಯಾರ್ಥಿಗಳನ್ನು (ಜೂನಿಯರ್ ವಿಭಾಗದಿಂದ 08 ಮತ್ತು ಸೀನಿಯರ್ ವಿಭಾಗದಿಂದ 08) ರಾಜ್ಯ ಮಟ್ಟದ ಸ್ಪರ್ಧೆಗೆ ಆಯ್ಕೆ ಮಾಡಿಕೊಳ್ಳಲಾಗುವುದು.
- ರಾಜ್ಯ ಮಟ್ಟದ ಸ್ಪರ್ಧೆಯನ್ನು ಬೆಂಗಳೂರಿನಲ್ಲಿ ನಿಗದಿಪಡಿಸುವ ದಿನಾಂಕದಂದು ಮುಖಾಮುಖಿಯಾಗಿ ನಡೆಸಲಾಗುವುದು. ದಿನಾಂಕವನ್ನು ಮುಂದೆ ತಿಳಿಸಲಾಗುವುದು.

**ಸ್ಪರ್ಧಾ ನಿಯಮಗಳು:-**

- ಪ್ರಶ್ನೆಗಳು ಪಠ್ಯ ವಿಷಯವನ್ನು ಆಧರಿಸಿದ್ದು, ಗಣಿತ, ವಿಜ್ಞಾನ, ಭಾರತದ ಇತಿಹಾಸ-ಪರಂಪರೆ, ಭೌಗೋಳಿಕ, ಸಾಂಸ್ಕೃತಿಕ, ಸಾಹಿತ್ಯ, ಭಾಷೆ, ಕಲೆ, ಕ್ರೀಡೆ ಹಾಗೂ ಸಾಮಾನ್ಯ ಜ್ಞಾನ ಇತ್ಯಾದಿ ವಿಷಯಗಳನ್ನು ಸಹ ಒಳಗೊಂಡಿರುತ್ತವೆ.
- ಬ್ಲಾಕ್ ಹಂತದ ರಸಪ್ರಶ್ನೆ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳಿಗೆ 30 ಬಹು ಆಯ್ಕೆ ಪ್ರಶ್ನೆಗಳಿಗೆ 15 ನಿಮಿಷಗಳ ಕಾಲಾವಕಾಶವನ್ನು ನೀಡಲಾಗಿದ್ದು, ಕಡಿಮೆ ಸಮಯದಲ್ಲಿ ಹೆಚ್ಚು ಪ್ರಶ್ನೆಗಳಿಗೆ ಉತ್ತರಿಸಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಟಾಪರ್‌ಗಳ ಆಯ್ಕೆಯು ಸಂಪೂರ್ಣವಾಗಿ ಸಾಫ್ಟ್‌ವೇರ್ ಸ್ವಯಂಚಾಲಿತವಾಗಿದೆ ಮತ್ತು ಯಾವುದೇ ಮಾನವ ಸಂವಹನವನ್ನು ಒಳಗೊಂಡಿಲ್ಲ.
- ವಿದ್ಯಾರ್ಥಿಯು ಆನ್‌ಲೈನ್‌ನಲ್ಲಿ ಉತ್ತರಿಸಲು ಆಯ್ಕೆ ಮಾಡಿ ಕೊಂಡಿರುವ ಭಾಷಾ ಮಾಧ್ಯಮದಲ್ಲಿಯೇ (ಕನ್ನಡ/ಆಂಗ್ಲ) ಪ್ರಶ್ನೆಗಳು ಇರುತ್ತವೆ, ಸ್ಪರ್ಧೆಯ ಸಮಯದಲ್ಲಿ ಭಾಷಾ ಮಾಧ್ಯಮ ಬದಲಾವಣೆಗೆ ಅವಕಾಶ ಇರುವುದಿಲ್ಲ.
- ನೋಂದಣಿಯ ನಂತರ ಸ್ಪರ್ಧೆಯ ರೂಪುರೇಷೆಗಳನ್ನು ತಿಳಿದುಕೊಳ್ಳಲು ವಿದ್ಯಾರ್ಥಿಗಳು ನಿಗದಿತ ದಿನಾಂಕದವರೆಗೆ ಟ್ರಯಲ್ ಆಧಾರದ ಮೇಲೆ ರಸಪ್ರಶ್ನೆಯಲ್ಲಿ ಭಾಗವಹಿಸಬಹುದು.
- ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಆಯಾ ಸುತ್ತುಗಳಲ್ಲಿ ಒಂದು ಬಾರಿ ಮಾತ್ರ ಭಾಗವಹಿಸಬಹುದಾಗಿದೆ.
- ಪ್ರತಿ ವಿದ್ಯಾರ್ಥಿಗೂ ಯಾದೃಚ್ಛಿಕ ಪಶ್ನೆಗಳನ್ನು ಆಯ್ಕೆ ಮಾಡಲಾಗುತ್ತದೆ.
- ಪ್ರತಿ ಸರಿಯಾದ ಉತ್ತರಕ್ಕೆ ಒಂದು ಅಂಕ, ತಪ್ಪು ಉತ್ತರಕ್ಕೆ 0 ಹಾಗೂ ಪ್ರಶ್ನೆಯನ್ನು ಉತ್ತರಿಸದೆ ಬಿಟ್ಟರೆ 0 ಅಂಕವೆಂದು ಪರಿಗಣಿಸಲಾಗುತ್ತದೆ. ನಕಾರಾತ್ಮಕ ಮೌಲ್ಯಮಾಪನವಿರುವುದಿಲ್ಲ.
- ಪ್ರತಿ ಪ್ರಶ್ನೆಗೆ ಉತ್ತರಿಸಲು ತೆಗೆದುಕೊಂಡ ಸಮಯವನ್ನು ಪರಿಗಣಿಸಲಾಗುವುದು, ಸ್ಪರ್ಧೆಯಲ್ಲಿ ಒಮ್ಮೆ ಉತ್ತರಿಸಿದ ಪ್ರಶ್ನೆಗೆ

LIVEWORKSHEETS

ಉತ್ತರ ತಪ್ಪನಿಸಿದಲ್ಲಿ ಅದೇ ಪ್ರಶ್ನೆಗೆ ಮತ್ತೊಮ್ಮೆ ಉತ್ತರಿಸಲು ಅವಕಾಶವಿರುವುದಿಲ್ಲ.

- ಸ್ಪರ್ಧೆಯಲ್ಲಿ ತಾಂತ್ರಿಕ ಸಮಸ್ಯೆಗಳು ಸಂಭವಿಸಿದರೆ ಇಲಾಖೆ ಹೊಣೆಗಾರಿಕೆಯಾಗುವುದಿಲ್ಲ.
- ಯಾವುದೇ ತಾಂತ್ರಿಕ ದೋಷದಿಂದ ಸ್ಪರ್ಧೆಗೆ ಅಡ್ಡಿಯಾದರೆ ಅಭ್ಯರ್ಥಿಯು ಬಿಟ್ಟು ಹೋದ ಪ್ರಶ್ನೆಯಿಂದ ಮತ್ತೆ ಪುನರಾರಂಭಿಸಬಹುದು ಮತ್ತು ಉಳಿದ ಸಮಯವನ್ನು ರಸಪ್ರಶ್ನೆ ಸ್ಪರ್ಧೆಗೆ ಪರಿಗಣಿಸಿ ಲೆಕ್ಕಾಚಾರದ ಸಮಯವನ್ನು ಪ್ರಾರಂಭದಿಂದ ತೆಗೆದುಕೊಂಡು ಮೊದಲ 15 ನಿಮಿಷಗಳ ಕಾಲಾವಕಾಶವನ್ನು ಪರಿಗಣಿಸಲಾಗುವುದು.
- ನಿಗದಿತ ವೇಳಾಪಟ್ಟಿಯಂತೆ ವಿದ್ಯಾರ್ಥಿಗಳು ರಸಪ್ರಶ್ನೆ ಸ್ಪರ್ಧೆಗೆ ಹಾಜರಾಗಬೇಕು. ಯಾವುದೇ ಕಾರಣದಿಂದ ವಿದ್ಯಾರ್ಥಿ ಅಥವಾ ವಿದ್ಯಾರ್ಥಿನಿ ಸ್ಪರ್ಧೆಯಿಂದ ತಪ್ಪಿಸಿ ಕೊಂಡರೆ ನಂತರ ಯಾವುದೇ ಪರ್ಯಾಯ ಅವಕಾಶ ಇರುವುದಿಲ್ಲ.
- ಸ್ಪರ್ಧೆಯಲ್ಲಿ ಭಾಗವಹಿಸಿರುವಾಗ ವಿದ್ಯಾರ್ಥಿಯು ಪರದೆಯನ್ನು (Screen) ಬಿಡಬಾರದು ಅಥವಾ ಕಿಟಕಿಯನ್ನು (Windows) ಮುಚ್ಚಬಾರದು ಹಾಗೂ ಯಾರ ಸಹಾಯವನ್ನು ಪಡೆಯಬಾರದು. (ಶಿಕ್ಷಕರು ಹಾಗೂ ಪೋಷಕರನ್ನೊಳಗೊಂಡಂತೆ) ಈ ಕಾರ್ಯಕ್ರಮವು ವಿದ್ಯಾರ್ಥಿಗಳ ಜ್ಞಾನಾರ್ಜನೆಯ ಬೆಳವಣಿಗೆಗೆ ಹಾಗೂ ಕಲಿಕೆಯಲ್ಲಿ ಆಸಕ್ತಿಯನ್ನು ವೃದ್ಧಿಸುವ ದೃಷ್ಟಿಯಿಂದ ಆಯೋಜಿಸಲಾಗಿರುತ್ತದೆ.
- ಸ್ಪರ್ಧೆಯ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಪಡೆಯಲು ಹಾಗೂ ವಿವಿಧ ಹಂತಗಳಲ್ಲಿ ಫಲಿತಾಂಶವನ್ನು ಪರಿಶೀಲಿಸಲು ನಿಯಮಿತವಾಗಿ ವಿದ್ಯಾವಾಹಿನಿ ವೆಬ್ ಪೋರ್ಟಲ್ ಭೇಟಿ ನೀಡುವುದು. ಇಲಾಖೆಯಿಂದ ಪ್ರತ್ಯೇಕ ಸಂವಹನ ನಡೆಸುವುದಿಲ್ಲ.

**ರಸಪ್ರಶ್ನೆ ಸ್ಪರ್ಧೆಯ ವೇಳಾಪಟ್ಟಿ**

| ಕ್ರ.ಸಂ | ವಿಷಯ | ದಿನಾಂಕ | ಸಮಯ |
|---|---|---|---|
| 1 | ಶಾಲಾ ಹಂತದ ಸ್ಪರ್ಧೆ ಮತ್ತು ನೋಂದಣಿ ಜೂನಿಯರ್ ಮತ್ತು ಸೀನಿಯರ್ ವಿದ್ಯಾರ್ಥಿಗಳಿಗೆ | 03.11.2025 ರಿಂದ 10.11.2025 ರವರೆಗೆ | ಶಾಲಾ ಅವಧಿಯಲ್ಲಿ |
| 2 | ತಾಲ್ಲೂಕು ಮಟ್ಟದ ಸ್ಪರ್ಧೆ ಜೂನಿಯರ್ ಮತ್ತು ಸೀನಿಯರ್ ವಿದ್ಯಾರ್ಥಿಗಳಿಗೆ | 04.11.2025 ರಿಂದ 21.11.2025 ರವರೆಗೆ | ಶಾಲಾ ಅವಧಿಯಲ್ಲಿ |
| 4 | ಫಲಿತಾಂಶ ಪ್ರಕಟಣೆ | 24.11.2025 | |
| 5 | ಜಿಲ್ಲಾ ಮಟ್ಟದ ಸ್ಪರ್ಧೆ ಜೂನಿಯರ್ ಮತ್ತು ಸೀನಿಯರ್ ವಿದ್ಯಾರ್ಥಿಗಳಿಗೆ | 27.11.2025 | ಆಯಾ ಬ್ಲಾಕ್ BRC ನಲ್ಲಿ |
| 6 | ಫಲಿತಾಂಶ ಪ್ರಕಟಣೆ | 28.11.2025 | |
| 7 | ವಿಭಾಗ ಮಟ್ಟದ ಸ್ಪರ್ಧೆ ಜೂನಿಯರ್ ಹಾಗೂ ಸೀನಿಯರ್ ವಿದ್ಯಾರ್ಥಿಗಳಿಗೆ | 02.12.2025 | ಆಯಾ ಜಿಲ್ಲಾ ಡಯಟ್‌ನಲ್ಲಿ |
| 8 | ಫಲಿತಾಂಶ ಪ್ರಕಟಣೆ | 03.12.2025 | |
| 9 | ರಾಜ್ಯ ಮಟ್ಟದ ಸ್ಪರ್ಧೆ ಜೂನಿಯರ್ ಹಾಗೂ ಸೀನಿಯರ್ ವಿದ್ಯಾರ್ಥಿಗಳಿಗೆ | ದಿನಾಂಕವನ್ನು ನಿಗದಿಪಡಿಸಲಾಗುವುದು. | ಮುಖಾಮುಖಿಯಾಗಿ |
| 10 | ಫಲಿತಾಂಶ ಪ್ರಕಟಣೆ | | |

ಪ್ರಶಸ್ತಿಗಳ ವಿವರ: (ಜೂನಿಯರ್ ವಿಭಾಗದ ವಿದ್ಯಾರ್ಥಿಗಳಿಗಾಗಿ)

| ಕ್ರ ಸಂ | ಸ್ಪರ್ಧೆಯ ಹಂತಗಳು | ಪ್ರಶಸ್ತಿಗಳು | | | ವಿಜೇತ ವಿದ್ಯಾರ್ಥಿಗಳ ಸಂಖ್ಯೆ |
|---|---|---|---|---|---|
| | | ಪ್ರಥಮ | ದ್ವಿತೀಯ | ತೃತೀಯ | |
| 1. | ತಾಲ್ಲೂಕು ಹಂತ | ರೂ.3000/- | ರೂ.2000/- | ರೂ.1000/- | 204 * 3=612 |
| 2. | ಜಿಲ್ಲಾ ಹಂತ | ರೂ.5000/- | ರೂ.3000/- | ರೂ.1500/- | 35 * 3 =105 |
| 3. | ವಿಭಾಗ ಹಂತ | ರೂ.10000/- | ರೂ.5000/- | ರೂ.3000/- | 4 * 3 = 12 |
| 4. | ರಾಜ್ಯ ಹಂತ | ರೂ.20000/- | ರೂ.15000/- | ರೂ.10000/- | 1 * 3 = 3 |

LIVEWORKSHEETS

ಪ್ರಶಸ್ತಿಗಳ ವಿವರ: (ಸೀನಿಯರ್ ವಿಭಾಗದ ವಿದ್ಯಾರ್ಥಿಗಳಿಗಾಗಿ)

| ಕ್ರ ಸಂ | ಸ್ಪರ್ಧೆಯ ಹಂತಗಳು | ಪ್ರಶಸ್ತಿಗಳು | | | ವಿಜೇತ ವಿದ್ಯಾರ್ಥಿಗಳ ಸಂಖ್ಯೆ |
|---|---|---|---|---|---|
| | | ಪ್ರಥಮ | ದ್ವಿತೀಯ | ತೃತೀಯ | |
| 1. | ತಾಲ್ಲೂಕು ಹಂತ | ರೂ.3000/- | ರೂ.2000/- | ರೂ.1000/- | 204* 3 =612 |
| 2. | ಜಿಲ್ಲಾ ಹಂತ | ರೂ.5000/- | ರೂ.3000/- | ರೂ.1500/- | 35 * 3 =105 |
| 3. | ವಿಭಾಗ ಹಂತ | ರೂ.10000/- | ರೂ.5000/- | ರೂ.3000/- | 4 * 3 = 12 |
| 4. | ರಾಜ್ಯ ಹಂತ | ರೂ.20000/- | ರೂ.15000/- | ರೂ.10000/- | 1 * 3 = 3 |

**ಜಿಲ್ಲಾ ಉಪನಿರ್ದೇಶಕರು (ಆಡಳಿತ) ಜವಾಬ್ದಾರಿ**

- ಜಿಲ್ಲಾ ಮಟ್ಟ ಮತ್ತು ಬ್ಲಾಕ್ ಮಟ್ಟದಲ್ಲಿ ರಸಪ್ರಶ್ನೆ ಕಾರ್ಯಕ್ರಮದ ಅನುಷ್ಠಾನ ಮತ್ತು ಮೇಲುಸ್ತುವಾರಿಗಾಗಿ ತಮ್ಮ ಹಂತದಲ್ಲಿ ನೋಡಲ್ ಅಧಿಕಾರಿಗಳನ್ನು ನಿಯೋಜಿಸುವುದು.
- ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರು, ಸಹಶಿಕ್ಷಕರು ಹಾಗೂ ಪೋಷಕರಿಗೆ ರಸಪ್ರಶ್ನೆ ಕಾರ್ಯಕ್ರಮದ ಪ್ರಾಮುಖ್ಯತೆಯ ಬಗ್ಗೆ ಅರಿವು ಮೂಡಿಸುವುದು ಹಾಗೂ ಶಾಲಾ ಹಂತದಲ್ಲಿ ಎಲ್ಲಾ ಶಾಲೆಗಳಲ್ಲಿಯೂ ರಸಪ್ರಶ್ನೆ ಸ್ಪರ್ಧೆ ನಡೆಸಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು.
- ಶಾಲೆಗಳಲ್ಲಿ ರಸಪ್ರಶ್ನೆ ಕಾರ್ಯಕ್ರಮ ನಡೆಯುತ್ತಿರುವ ಸಮಯದಲ್ಲಿ ಯಾದೃಚ್ಛಿಕವಾಗಿ ಭೇಟಿ ನೀಡುವುದು. ಸೂಕ್ತ ಮಾರ್ಗದರ್ಶನ ನೀಡುವುದು.
- ರಸಪ್ರಶ್ನೆ ಕಾರ್ಯಕ್ರಮದ ಆಯೋಜನೆಯಲ್ಲಿ ಸಮಸ್ಯೆಗಳಿದ್ದಲ್ಲಿ ರಾಜ್ಯ ಕಛೇರಿಯನ್ನು ಸಂಪರ್ಕಿಸಿ ಪರಿಹಾರಗಳನ್ನು ಕಂಡುಕೊಳ್ಳುವುದು.
- ಜಿಲ್ಲಾ ಮಟ್ಟದಲ್ಲಿ ಜೂನಿಯರ್ ಹಾಗೂ ಸೀನಿಯರ್ ವಿಭಾಗದಿಂದ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳು ಆಯಾ ಜಿಲ್ಲಾ ಡಯಟ್‌ಗಳಲ್ಲಿ ಪ್ರಾಂಶುಪಾಲರ ನೇತೃತ್ವದಲ್ಲಿ ವಿಭಾಗ ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ಭಾಗವಹಿಸುವಂತೆ ಕ್ರಮವಹಿಸುವುದು.

**ಬ್ಲಾಕ್ ಸಂಪನ್ಮೂಲ ಸಮನ್ವಯಾಧಿಕಾರಿ (BRC) ಜವಾಬ್ದಾರಿ**

ತಾಲ್ಲೂಕು ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ವಿಜೇತರಾದ ವಿದ್ಯಾರ್ಥಿಗಳು BRC ಕೇಂದ್ರದಲ್ಲಿ BRC ರವರ ನೇತೃತ್ವದಲ್ಲಿ ಜಿಲ್ಲಾ ಹಂತದ ರಸಪ್ರಶ್ನೆ ಸ್ಪರ್ಧೆಯನ್ನು ನಡೆಸುವುದು.

**ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕರ ಜವಾಬ್ದಾರಿ**

- ಪೋಷಕರಿಗೆ ಕಾರ್ಯಕ್ರಮದ ವಿನ್ಯಾಸ ಹಾಗೂ ಪ್ರಾಮುಖ್ಯತೆಯ ಬಗ್ಗೆ ಅರಿವು ಮೂಡಿಸುವುದು.
- ವಿದ್ಯಾರ್ಥಿಗಳಿಗೆ ರಸಪ್ರಶ್ನೆ ಕಾರ್ಯಕ್ರಮದಲ್ಲಿ ಭಾಗವಹಿಸಲು ಪ್ರೋತ್ಸಾಹಿಸುವುದು.
- ಶಾಲಾ ಹಂತದಲ್ಲಿ ಒಬ್ಬ ವಿಜ್ಞಾನ/ಗಣಿತ ಶಿಕ್ಷಕರನ್ನು ಸದರಿ ಕಾರ್ಯಕ್ರಮದ ಮೇಲುಸ್ತುವಾರಿಗೆ ನೇಮಿಸಿ ವಿದ್ಯಾರ್ಥಿಗಳು ರಸಪ್ರಶ್ನೆ ಕಾರ್ಯಕ್ರಮದಲ್ಲಿ ಭಾಗವಹಿಸಲು ಮಾರ್ಗದರ್ಶನ ನೀಡುವುದು.

ಉಪನಿರ್ದೇಶಕರು (ಆಡಳಿತ) ರವರು ಜಿಲ್ಲಾ ಹಾಗೂ ತಾಲ್ಲೂಕು ಹಂತದ ಅನುಷ್ಠಾನಾಧಿಕಾರಿಗಳಾದ ಬಿಇಓ, ಬಿಆರ್‌ಸಿ, ಡಯಟ್‌ನ ಹಿರಿಯ ಹಾಗೂ ಕಿರಿಯ ಉಪನ್ಯಾಸಕರು, ಶಿಕ್ಷಣಾಧಿಕಾರಿಗಳು, ವಿಷಯ ಪರಿವೀಕ್ಷಕರ ಸಭೆಯನ್ನು ಕರೆದು ಕಾರ್ಯಕ್ರಮದ ಬಗ್ಗೆ ಮಾಹಿತಿಯನ್ನು ನೀಡುವುದು ಹಾಗೂ ತಮ್ಮ ಕಛೇರಿಯ ಒಬ್ಬ ಅಧಿಕಾರಿಯನ್ನು ನೋಡಲ್ ಅಧಿಕಾರಿಯಾಗಿ ನೇಮಿಸಿ ಕಾರ್ಯಕ್ರಮದ ಅನುಷ್ಠಾನ ಮತ್ತು ಮೇಲುಸ್ತುವಾರಿ ಮಾಡಿ ತಾಲ್ಲೂಕು, ಜಿಲ್ಲಾ ಮತ್ತು ವಿಭಾಗ ಮಟ್ಟದಲ್ಲಿ ವಿದ್ಯಾರ್ಥಿಗಳು ಭಾಗವಹಿಸಲು ಮೇಲ್ವಿಚಾರಣೆ ಮಾಡುವುದು. ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸುವಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸೂಚಿಸಿದೆ.

Digitally signed by
K VIDYA KUMARI
Date: 30-10-2025

ರಾಜ್ಯ ಯೋಜನಾ ನಿರ್ದೇಶಕರು
ಸಮಗ್ರ ಶಿಕ್ಷಣ ಕರ್ನಾಟಕ
ಬೆಂಗಳೂರು

ಅಗತ್ಯ ಕ್ರಮಕ್ಕಾಗಿ

1. ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಹಾಗೂ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಶಿಕ್ಷಣ

LIVEWORKSHEETS

ಕರ್ನಾಟಕ ರವರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಪ್ರೌಢ ಶಾಲಾ ಮುಖ್ಯ ಶಿಕ್ಷಕರಿಗೆ ಸುತ್ತೋಲೆಯ ಪ್ರತಿಯನ್ನು ಕಳುಹಿಸುವುದು ಹಾಗೂ ರಸಪ್ರಶ್ನೆ ನೋಡಲ್ ಅಧಿಕಾರಿಯವರಿಗೆ ಸೂಕ್ತ ಮಾರ್ಗದರ್ಶನ ನೀಡುವುದು.

2. ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಅಭಿವೃದ್ಧಿ) ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ.

**ಮಾಹಿತಿಗಾಗಿ:**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು - 01
2. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಕೆ.ಆರ್. ವೃತ್ತ, ಬೆಂಗಳೂರು-01
3. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರ್ಗಿ ಹಾಗೂ ಧಾರವಾಡ ವಿಭಾಗ.
4. ನಿರ್ದೇಶಕರು, (ಪ್ರಾಥಮಿಕ ಶಿಕ್ಷಣ) ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು - 01.
5. ನಿರ್ದೇಶಕರು, (ಪ್ರೌಢ ಶಿಕ್ಷಣ) ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು - 01.
6. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ. ಬನಶಂಕರಿ, ಬೆಂಗಳೂರು-85.
7. ಕಾರ್ಯಕ್ರಮಾಧಿಕಾರಿ, ಯೋಜನಾ ಶಾಖೆ, ಸ.ಶಿ.ಕ, ಬೆಂಗಳೂರು -01
8. ಕಿರಿಯ ಕಾರ್ಯಕ್ರಮಾಧಿಕಾರಿ, ಮಾಧ್ಯಮ ಮತ್ತು ದಾಖಲೀಕರಣ ಶಾಖೆ, ಸ.ಶಿ.ಕ, ಬೆಂಗಳೂರು -01 SSK Websiteನಲ್ಲಿ upload ಮಾಡಲು.

:: ಮುಂಬರಹ ::

ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರುರವರ ಸುತ್ತೋಲೆಯಲ್ಲಿ ತಿಳಿಸಿರುವಂತೆ 2025-26ನೇ ಸಾಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ರಸಪ್ರಶ್ನೆ ಸ್ಪರ್ಧೆಯನ್ನು ವಿವಿಧ ಹಂತಗಳಲ್ಲಿ ಎಲ್ಲಾ ವಲಯಗಳಲ್ಲಿ ಆಯೋಜಿಸಲು ಅಗತ್ಯ ಕ್ರಮ ವಹಿಸುವುದು.

7/11/25

ಉಪನಿರ್ದೇಶಕರು(ಆ)
ಶಾ.ಶಿ.ಇಲಾಖೆ ಹಾಗೂ ಪದನಿಮಿತ್ತ
ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು
ಸಮಗ್ರ ಶಿಕ್ಷಣ ಕರ್ನಾಟಕ, ಬೆಳಗಾವಿ(ದ)

ಗೆ,

ಜಿಲ್ಲೆಯ ಎಲ್ಲ
ಕ್ಷೇತ್ರ ಶಿಕ್ಷಣಾಧಿಕಾರಿಗಳು
ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳು

LIVEWORKSHEETS